ಹೊಸ ಉಪನೋಂದಣಿ ಕಛೇರಿ ಪ್ರಾರಂಭಿಸುವುದು

2047 (2490); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಕಾಳಗಿಯಲ್ಲಿ ಹೊಸ ಉಪ ನೋಂದಣಿ ಕಛೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಎಷ್ಟು ಕಾಲಮಿತಿಯೊಳಗೆ ಹೊಸ ಉಪ ನೋಂದಣಿ ಕಛೇರಿಯನ್ನು ಮಂಜೂರು ಮಾಡಲಾಗುವುದು? (ವಿವರ ನೀಡುವುದು)

ಶ್ರೀ ಎ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು)

ಅ) ಹೌದು

ಆ) ಹೊಸ ಉಪ ನೋಂದಣಿ ಕಛೇರಿಯನ್ನು ಪ್ರಾರಂಭಿಸಲು ಒಟ್ಟು 6 ಮಾನದಂಡಗಳನ್ನು ಅಳವಡಿಸಲಾಗಿದ್ದು, ಇದರಲ್ಲಿ 3 ಮಾನದಂಡಗಳು ಪೂರೈಸದೆ ಇರುವುದರಿಂದ ಹೊಸದಾಗಿ ಉಪ ನೋಂದಣಿ ಕಛೇರಿಯನ್ನು ಚಿಂಚೋಳಿ ವಿಧಾನಸಭಾ ಕ್ಷೇತ್ರದ ಕಾಳಗಿಯಲ್ಲಿ ತೆರೆಯುವ ಪ್ರಶ್ನೆ ಉದ್ಭವಿಸುವುದಿಲ್ಲ.

ನಾಡ ಕಛೇರಿ ಶಿಥಿಲಗೊಂಡಿರುವುದು

2048 (2491); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ಚಿಂಚೋಳಿ ತಾಲ್ಲೂಕಿನ ಕೋಡ್ಲಿ ಹೋಬಳಿಯಲ್ಲಿ ಕಂದಾಯ ಇಲಾಖೆಯ ನಾಡ ಕಛೇರಿ ಕಾರ್ಯಲಯ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಕೋಡ್ಲಿ ಹೋಬಳಿಯ ನಾಡ ಕಛೇರಿಗೆ ಕಟ್ಟಡ ನಿರ್ಮಾಣ ಮಾಡಲು ಎಷ್ಟು ಕಾಲಮಿತಿಯೊಳಗೆ ಅನುದಾನ ಬಿಡುಗಡೆ ಮಾಡಲಾಗುವುದು? (ವಿವರ ನೀಡುವುದು)

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು)

ಅ) ಚಿಂಚೋಳಿ ತಾಲ್ಲೂಕಿನ ಕೋಡ್ಲಿ ಹೋಬಳಿಯಲ್ಲಿ ಕಂದಾಯ ಇಲಾಖೆಯ ನಾಡ ಕಛೇರಿ (ಉಪ ತಹಶೀಲ್ದಾರ) ಕಾರ್ಯಾಲಯದ ಕಟ್ಟಡ ಹಳೆಯದಾಗಿರುತ್ತದೆ.

ಆ) ನಾಡ ಕಛೇರಿ ಕಟ್ಟಡ ನಿರ್ಮಾಣವು ಸರ್ಕಾರದ ಯೋಜನೆಯಾಗಿರುವುದಿಲ್ಲ. ಆದರೆ ಈ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದ್ದು, 2015–16ನೇ ಸಾಲಿನ ಆಯವ್ಯಯದಲ್ಲಿ ಈ ಬಾಬ್ತಿಗೆ ಅನುದಾನವನ್ನು ನಿಗದಿಪಡಿಸಿದಲ್ಲಿ ಯೋಜನೆಯನ್ನು ಕೈಗೆತ್ತಿಕೊಳ್ಳಲಾಗುವುದು.

ಲಂಬಾಣಿ ತಾಂಡಗಳನ್ನು ಕಂದಾಯ ಗ್ರಾಮವನ್ನಾಗಿ ಪರಿವರ್ತಿಸುವುದು

2049 (2492); ಡಾ॥ ಉಮೇಶ್ ಜಿ. ಜಾಧವ್ (ಚಿಂಚೋಳಿ)

ಅ) ರಾಜ್ಯದಲ್ಲಿರುವ ಎಲ್ಲಾ ಅರ್ಹ ಲಂಬಾಣಿ ತಾಂಡ, ಗೊಲ್ಲರಹಟ್ಟಿ, ಗಿರಿಜನ ಹಟ್ಟಿ ಮುಂತಾದವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಿ ಅವುಗಳಿಗೆ ಕಾನೂನಾತ್ಮಕ ಸ್ಥಾನಮಾನ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ, ಎಷ್ಟು ಕಾಲಮಿತಿಯೊಳಗೆ ಕ್ರಮಕೈಗೊಳ್ಳಲಾಗುವುದು? (ವಿವರ ನೀಡುವುದು)

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಕಂದಾಯ ಸಚಿವರು)

ಅ) ಇದೆ.

ಆ) ಇವುಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ಕಾನೂನು ರೀತ್ಯಾ ಕ್ರಮ ಕೈಗೊಳ್ಳಲಾಗುವುದು.